**ಕರ್ನಾಟಕ ಸರ್ಕಾರ**

**ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ**

ನಂ. 16–ಡಿ, 2ನೇ ಮಹಡಿ, ದೇವರಾಜು ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ , ವಸಂತ ನಗರ, ಬೆಂಗಳೂರು–52

ದೂ: 080 22268578 ಫ್ಯಾ: 080 22268576 e-mail: kscbcb@gmail.com

ಸಂಖ್ಯೆ:ಕರಾಹಿಂವಆ/ಸಿಬ್ಬಂದಿ/ಸಿಆರ್–12/2021–22 ದಿನಾಂಕ:12.08.2022

ರವರಿಗೆ,

ಡಾ॥ ಎನ್.ವಿ ಪ್ರಸಾದ್, ಭಾ.ಆ.ಸೇ
ಸರ್ಕಾರದ ಕಾರ್ಯದರ್ಶಿ,
ಸಾರಿಗೆ ಇಲಾಖೆ,
1ನೇ ಮಹಡಿ, 3ನೇ ಗೇಟ್, ಬಹುಮಹಡಿಗಳ ಕಟ್ಟಡ,
ಬೆಂಗಳೂರು–560001.

ಮಾನ್ಯರೆ,

ವಿಷಯ:– ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ಸಿದ್ಧಗೊಂಡಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ–2015ರ ಮುಖ್ಯ ವರದಿಯ ಮೂಲ ಪ್ರತಿಯ ವಿವರದ ಕುರಿತು.

ಉಲ್ಲೇಖ:– ಆಯೋಗದ ಪತ್ರ ಸಂಖ್ಯೆ: ಕರಾಹಿಂವಆ/ಸಿಬ್ಬಂದಿ/ಸಿಆರ್–12/ 2021–22 ದಿನಾಂಕ: 05.03.2022.

****

ಶ್ರೀ ಹೆಚ್. ಕಾಂತರಾಜ ಹಿಂದಿನ ಆಯೋಗದ ಅಧ್ಯಕ್ಷರು, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ 2014–15ನೇ ಸಾಲಿನಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸಲಾಗಿದ್ದು, ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ. ಸದರಿ ಆಯೋಗವು ಸಿದ್ಧಪಡಿಸಿದ ಅಂಕಿ–ಅಂಶಗಳ ವಿವರ ಹಾಗೂ ಮುಖ್ಯ ವರದಿ ಒಳಗೊಂಡಂತೆ ಸೀಲ್ಡ್ ಬಾಕ್ಸನಲ್ಲಿ ಇರಿಸಿ ಆಯೋಗಕ್ಕೆ ನೀಡಿದ್ದು, ಸದರಿ ಬಾಕ್ಸ್‌ಗಳನ್ನು ಕಛೇರಿಯ ಕೊಠಡಿಯಲ್ಲಿ ಇಟ್ಟು ಸೀಲು ಮಾಡಲಾಗಿರುತ್ತದೆ.

ಆಯೋಗದ 214ನೇ ವಿಶೇಷ ಸಭೆಯ ತೀರ್ಮಾನದಂತೆ ದಿನಾಂಕ: 26.08.2021 ರಂದು ಹಾಲಿ ಆಯೋಗದ ಅಧ್ಯಕ್ಷರು, ಸದಸ್ಯರು ಹಾಗೂ ಸದಸ್ಯ ಕಾರ್ಯದರ್ಶಿಗಳ ಸಮಕ್ಷಮದಲ್ಲಿ ಆಯೋಗದ ಕಛೇರಿಯಲ್ಲಿ ಭದ್ರವಾಗಿ ಇರಿಸಲಾಗಿದ್ದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2015 ರಲ್ಲಿ ಸಂಗ್ರಹಿಸಿದ ಅಂಕಿ–ಅಂಶಗಳು ಹಾಗೂ ಇತರೆ ವಿವರಗಳನ್ನೊಳಗೊಂಡ 04 ಸೀಲ್ಡ್ ಮಾಡಲ್ಪಟ್ಟಿದ್ದ ಪೆಟ್ಟಿಗೆಗಳನ್ನು ತೆರೆಯಲಾಗಿರುತ್ತದೆ. ಸದರಿ ಪೆಟ್ಟಿಗೆಗಳಲ್ಲಿ ಇರಿಸಿದ್ದ ಸಮೀಕ್ಷೆಗೆ ಸಂಬಂಧಿಸಿದ ಮಾಹಿತಿಗಳ ವಿವರ ಈ ಕೆಳಕಂಡಂತಿರುತ್ತದೆ.

1. ಅಂಕಿ–ಅಂಶಗಳನ್ನೊಳಗೊಂಡ ಮುದ್ರಿತ ಪುಸ್ತಕಗಳು.
2. ಮುಖ್ಯ ವರದಿ.
3. 02 ಸಿ.ಡಿ.

ಮುದ್ರಿತಗೊಂಡಿರುವ ಮುಖ್ಯ ವರದಿಯನ್ನು ಆಯೋಗವು ಅವಗಾಹಿಸಿದಾಗ ಮುಖ್ಯ ವರದಿಯ ಮೂಲ/ಹಸ್ತ ಪ್ರತಿ ಸೀಲ್ಡ್ ಬಾಕ್ಸ್‌ನಲ್ಲಿ ಲಭ್ಯವಿಲ್ಲದೇ ಈ ಮುದ್ರಿತ ಮುಖ್ಯ ವರದಿಯಲ್ಲಿ ಸಹಿ ಹಾಕಿರುವ ಪುಟದಲ್ಲಿ ಹಿಂದಿನ ಅಧ್ಯಕ್ಷರಾದ ಶ್ರೀ ಹೆಚ್. ಕಾಂತರಾಜ ಹಾಗೂ ಎಲ್ಲಾ ಸದಸ್ಯರುಗಳ ಸ್ಕ್ಯಾನ್ (Scanned) ಸಹಿ ಇರುತ್ತದೆ. ಆದರೆ, ಸದಸ್ಯ ಕಾರ್ಯದರ್ಶಿರವರ ಸಹಿ ಇಲ್ಲದೆ ಇದ್ದು, Bracket ನಲ್ಲಿ ಡಾ॥ ಎನ್.ವಿ. ಪ್ರಸಾದ್, ಭಾ.ಆ.ಸೇ ಎಂದು ನಮೂದಿಸಲಾಗಿರುತ್ತದೆ.

Contd...2

ಆಯೋಗದ 217ನೇ ಸಭೆಯಲ್ಲಿ ತೀರ್ಮಾನಿಸಿದಂತೆ ಮುಖ್ಯ ವರದಿಯ ಮೂಲ/ಹಸ್ತ ಪ್ರತಿ ಇಲ್ಲದೇ ಇದ್ದು ಹಾಗೂ ಹಾಲಿ ಲಭ್ಯವಿದ್ದ ಮುದ್ರಿತ ಮುಖ್ಯ ವರದಿಯಲ್ಲಿ ಸದಸ್ಯ ಕಾರ್ಯದರ್ಶಿಯವರ ಹೆಸರು ಇದ್ದು ಸಹಿ ಇಲ್ಲದೇ ಇರುವ ಬಗ್ಗೆ ಹಾಗೂ ಅಂದಿನ ಸದಸ್ಯ ಕಾರ್ಯದರ್ಶಿರವರಾದ ಡಾ॥ ಎನ್.ವಿ. ಪ್ರಸಾದ್, ಭಾ.ಆ.ಸೇ ರವರಿಂದ ಹೆಚ್ಚಿನ ಮಾಹಿತಿ ಪಡೆಯಲು ನಿರ್ಣಯಿಸಲಾಗಿರುತ್ತದೆ.

ಮುಖ್ಯ ವರದಿಯ ಮೂಲ/ಹಸ್ತ ಪ್ರತಿ ಕಛೇರಿಯಲ್ಲಿ ಲಭ್ಯವಿರುವುದಿಲ್ಲ ಹಾಗೂ **ಹಾಲಿ ಲಭ್ಯವಿದ್ದ ಮುದ್ರಿತ ಪ್ರತಿಯಲ್ಲಿ** ಸದಸ್ಯ ಕಾರ್ಯದರ್ಶಿಯವರ ಸಹಿ ಇಲ್ಲದೇ ಇದ್ದು, ಇದನ್ನು ಮುದ್ರಿಸಿರುವುದರ ಬಗ್ಗೆ ಕಛೇರಿಯಿಂದ ಯಾವುದೇ ಪತ್ರ ವ್ಯವಹಾರವಾಗಲಿ ಅಥವಾ ಹಣ ಪಾವತಿಯಾಗಲಿ ಮಾಡಲಾಗಿರುವುದಿಲ್ಲ. ಹಾಗಾಗಿ ಈ ವಿಷಯಕ್ಕೆ ಸಂಬಂಧಪಟ್ಟ ಹೆಚ್ಚಿನ ವಿವರಗಳನ್ನು ಒಳಗೊಂಡಂತೆ ತಮ್ಮ ಅಭಿಪ್ರಾಯಗಳನ್ನು ಆಯೋಗಕ್ಕೆ ನೀಡಲು ಈ ಮೇಲಿನ ಉಲ್ಲೇಖ ಆಯೋಗದ ಉಲ್ಲೇಖಿತ ದಿನಾಂಕ: 05.03.2022ರ ಪತ್ರದಲ್ಲಿ ತಮ್ಮನ್ನು ಕೋರಲಾಗಿತ್ತು ಪ್ರತಿ ಲಗತ್ತಿಸಿದೆ. ಈವರೆವಿಗೂ ತಮ್ಮಿಂದ ಅಭಿಪ್ರಾಯ ಆಯೋಗದಲ್ಲಿ ಸ್ವೀಕೃತವಾಗಿರುವುದಿಲ್ಲ.

ಒಂದು ವಾರದಲ್ಲಿ ತಮ್ಮ ಅಭಿಪ್ರಾಯ ನೀಡದಿದ್ದಲ್ಲಿ ಆಯೋಗದ ಮುಖ್ಯವರದಿಯ ತಯಾರಿಕೆಯ ವಿವರ ಹಾಗೂ ಮುದ್ರಿತ ಮುಖ್ಯ ವರದಿಗೆ ಸಹಿ ಇಲ್ಲದೇ ಇರುವುದು ತಮ್ಮ ಗಮನಕ್ಕೆ ಬಂದಿರುತ್ತದೆ. ಆದಾಗ್ಯೂ ತಮಗೆ ಸಹಮತವಿಲ್ಲದೆ ಸಹಿ ಮಾಡಿರುವುದಿಲ್ಲ ಎಂದು ಪರಿಗಣಿಸಲಾಗುವುದು ಎಂಬುದಾಗಿ ತಿಳಿಸಲು ಆಯೋಗದ ಮಾನ್ಯ ಅಧ್ಯಕ್ಷರಿಂದ ನಿರ್ದೇಶಿಸಲ್ಪಟ್ಟಿದ್ದೇನೆ.

ಸದಸ್ಯ ಕಾರ್ಯದರ್ಶಿ
ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ,
ಬೆಂಗಳೂರು.

ಕರ್ನಾಟಕ ಸರ್ಕಾರ

# ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ

ನಂ. 16-ಡಿ.ದೇವರಾಜ ಅರಸು ಭವನ, 2ನೇ ಮಹಡಿ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು-560052.
ದೂ:080 29578999
e-mail kscbcb@gmail.com

ಸಂಖ್ಯೆ:ಕರಾಹಿಂವಆ:ಸಿಬ್ಬಂದಿ:ಸಿಆರ್-12/2021-22 ದಿನಾಂಕ:05.03.2022

ರವರಿಗೆ,

ಡಾ॥ ಎನ್.ವಿ. ಪ್ರಸಾದ್, ಭಾ.ಆ.ಸೇ.
ಪ್ರಾದೇಶಿಕ ಆಯುಕ್ತರು,
ಕಲಬುರಗಿ ವಿಭಾಗ,
ಮಿನಿ ವಿಧಾನಸೌಧ,
ಕಲಬುರಗಿ.

ಮಾನ್ಯರೆ,

ವಿಷಯ: ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ಸಿದ್ಧಗೊಂಡಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ-2015ರ ಮುಖ್ಯ ವರದಿಯ ಮೂಲ ಪ್ರತಿಯ ವಿವರದ ಕುರಿತು.

ಉಲ್ಲೇಖ: ಆಯೋಗದ 217ನೇ ಸಭೆಯಲ್ಲಿ ಕೈಗೊಂಡ ನಿರ್ಣಯದ ಅನುಸಾರ.

****

ಶ್ರೀ ಹೆಚ್. ಕಾಂತರಾಜ ಹಿಂದಿನ ಆಯೋಗದ ಅಧ್ಯಕ್ಷರು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ 2014-15ನೇ ಸಾಲಿನಲ್ಲಿ ಸಾಮಾಜಿಕ ಮತ್ತು ಶೈಕಣಿಕ ಸಮೀಕ್ಷೆ ನಡೆಸಲಾಗಿದ್ದು, ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ. ಸದರಿ ಆಯೋಗವು ಸಿದ್ಧಪಡಿಸಿದ ಅಂಕಿ-ಅಂಶಗಳ ವಿವರ ಹಾಗೂ ಮುಖ್ಯ ವರದಿ ಒಳಗೊಂಡಂತೆ ಸೀಲ್ಡ್ ಬಾಕ್ಸ್‌ನಲ್ಲಿ ಇರಿಸಿ ಆಯೋಗಕ್ಕೆ ನೀಡಿದ್ದು, ಸದರಿ ಬಾಕ್ಸ್‌ಗಳನ್ನು ಕಛೇರಿಯ ಕೊಠಡಿಯಲ್ಲಿ ಇಟ್ಟು ಸೀಲು ಮಾಡಲಾಗಿರುತ್ತದೆ.

ಆಯೋಗದ 214ನೇ ವಿಶೇಷ ಸಭೆಯ ತೀರ್ಮಾನದಂತೆ ದಿನಾಂಕ: 26.08.2021 ರಂದು ಹಾಲಿ ಆಯೋಗದ ಅಧ್ಯಕ್ಷರು, ಸದಸ್ಯರು ಹಾಗೂ ಸದಸ್ಯ ಕಾರ್ಯದರ್ಶಿಗಳ ಸಮಕ್ಷಮದಲ್ಲಿ ಆಯೋಗದ ಕಛೇರಿಯಲ್ಲಿ ಭದ್ರವಾಗಿ ಇರಿಸಲಾಗಿದ್ದ ಸಾಮಾಜಿಕ ಮತ್ತು ಶೈಕಣಿಕ ಸಮೀಕ್ಷೆ 2015 ರಲ್ಲಿ ಸಂಗ್ರಹಿಸಿದ ಅಂಕಿ-ಅಂಶಗಳು ಹಾಗೂ ಇತರೆ ವಿವರಗಳನ್ನೊಳಗೊಂಡ 04 ಸೀಲ್ಡ್ ಮಾಡಲ್ಪಟ್ಟಿದ್ದ ಪೆಟ್ಟಿಗೆಗಳನ್ನು ತೆರೆಯಲಾಗಿರುತ್ತದೆ. ಸದರಿ ಪೆಟ್ಟಿಗೆಗಳಲ್ಲಿ ಇರಿಸಿದ್ದ ಸಮೀಕ್ಷೆಗೆ ಸಂಬಂಧಿಸಿದ ಮಾಹಿತಿಗಳ ವಿವರ ಈ ಕೆಳಕಂಡಂತಿರುತ್ತದೆ.

1. ಅಂಕಿ ಅಂಶಗಳನ್ನೊಳಗೊಂಡ ಮುದ್ರಿತ ಪುಸ್ತಕಗಳು.
2. ಮುಖ್ಯ ವರದಿ.
3. 02 ಸಿಡಿ

ಮುದ್ರಿತಗೊಂಡಿರುವ ಮುಖ್ಯ ವರದಿಯನ್ನು ಆಯೋಗವು ಅವಗಾಹಿಸಿದಾಗ ಮುಖ್ಯ ವರದಿಯ ಮೂಲ/ಹಸ್ತ ಪ್ರತಿ ಸೀಲ್ಡ್ ಬಾಕ್ಸ್‌ನಲ್ಲಿ ಲಭ್ಯವಿಲ್ಲದೇ ಈ ಮುದ್ರಿತ ಮುಖ್ಯ ವರದಿಯಲ್ಲಿ ಸಹಿ ಹಾಕಿರುವ ಪುಟದಲ್ಲಿ ಹಿಂದಿನ ಅಧ್ಯಕ್ಷರಾದ ಶ್ರೀ ಹೆಚ್. ಕಾಂತರಾಜ ಹಾಗೂ ಎಲ್ಲಾ ಸದಸ್ಯರುಗಳ ಸ್ಕ್ಯಾನ್ (Scanned) ಸಹಿ ಇರುತ್ತವೆ. ಆದರೆ ಸದಸ್ಯ ಕಾರ್ಯದರ್ಶಿರವರ ಸಹಿ ಇಲ್ಲದೆ ಇದ್ದು Bracket ನಲ್ಲಿ ಡಾ॥ ಎನ್.ವಿ. ಪ್ರಸಾದ್, ಭಾ.ಆ.ಸೇ. ಎಂದು ನಮೂದಿಸಲಾಗಿರುತ್ತದೆ.

ಆಯೋಗದ 217ನೇ ಸಭೆಯಲ್ಲಿ ತೀರ್ಮಾನಿಸಿರುವಂತೆ ಮುಖ್ಯ ವರದಿಯ ಮೂಲ/ಹಸ್ತ ಪ್ರತಿ ಇಲ್ಲದೇ ಇದ್ದು ಹಾಗೂ ಹಾಲಿ ಲಭ್ಯವಿದ್ದ ಮುದ್ರಿತ ಮುಖ್ಯ ವರದಿಯಲ್ಲಿ ಸದಸ್ಯ ಕಾರ್ಯದರ್ಶಿಯವರ ಹೆಸರು ಇದ್ದು ಸಹಿ ಇಲ್ಲದೇ ಇರುವ ಬಗ್ಗೆ ಹಾಗೂ ಅಂದಿನ ಸದಸ್ಯ ಕಾರ್ಯದರ್ಶಿರವರಾದ ಡಾ। ಎನ್.ವಿ. ಪ್ರಸಾದ್, ಭಾ.ಆ.ಸೇ. ರವರಿಂದ ಹೆಚ್ಚಿನ ಮಾಹಿತಿ ಪಡೆಯಲು ನಿರ್ಣಯಿಸಲಾಗಿರುತ್ತದೆ.

ಅದರಂತೆ, ಮುಖ್ಯ ವರದಿಯ ಮೂಲ/ಹಸ್ತ ಪ್ರತಿ ಕಛೇರಿಯಲ್ಲಿ ಲಭ್ಯವಿರುವುದಿಲ್ಲ ಹಾಗೂ ಹಾಲಿ ಲಭ್ಯವಿದ್ದ ಮುದ್ರಿತ ಪ್ರತಿಯಲ್ಲಿ ಸದಸ್ಯ ಕಾರ್ಯದರ್ಶಿಯವರ ಸಹಿ ಇಲ್ಲದೇ ಇದ್ದು, ಇದನ್ನು ಮುದ್ರಿಸಿರುವುದರ ಬಗ್ಗೆ ಕಛೇರಿಯಿಂದ ಯಾವುದೇ ಪತ್ರ ವ್ಯವಹಾರವಾಗಲಿ ಅಥವಾ ಹಣ ಪಾವತಿಯಾಗಲಿ ಮಾಡಲಾಗಿರುವುದಿಲ್ಲ. ಹಾಗಾಗಿ ಆಯೋಗದ 217ನೇ ಸಭೆಯ ನಿರ್ಣಯದಂತೆ, ಈ ವಿಷಯಕ್ಕೆ ಸಂಬಂಧಪಟ್ಟ ಹೆಚ್ಚಿನ ವಿವರಗಳನ್ನು ಒಳಗೊಂಡಂತೆ ತಮ್ಮ ಅಭಿಪ್ರಾಯವನ್ನು ಆಯೋಗಕ್ಕೆ ನೀಡಲು ಕೋರುತ್ತೇನೆ.

ತಮ್ಮ ವಿಶ್ವಾಸಿ,

7/3/22

ಸದಸ್ಯ ಕಾರ್ಯದರ್ಶಿ,
ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ,
ಬೆಂಗಳೂರು.